# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ ಕಟ್ಟಡ ಜಯಂತಿ ನಗರ ವೃತ್ತ ಹೊರಮಾವು/ಕಲ್ಕೆರೆ ಮುಖ್ಯರಸ್ತೆ**

**ಹೊರಮಾವು ಗ್ರಾಮ, ಬೆಂಗಳೂರು- 560113**

ದಿನಾಂಕ: 06.08.2022

ಸಂಖ್ಯೆ:ಬಿಬಿಎಂಪಿ/ಸ.ಕಾ.ಅ/ಹೊಉವಿ/ಪಿಆರ್/ /2022-23

ಮಾನ್ಯ ಆಯುಕ್ತರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಕಛೇರಿ ಆದೇಶ ಸಂಖ್ಯೆ:ಬಿ12(5)ಪಿಆರ್/35/ 2020-21 ದಿನಾಂಕ:21/09/2020 ರ ಆದೇಶದಂತೆ ಹೊರಮಾವು ವಾರ್ಡ್ ಸಂಖ್ಯೆ-25 ರ ನೋಡಲ್ ಅಧಿಕಾರಿಯಾದ ಶ್ರೀಮತಿ.ಸರೋಜಾದೇವಿ ಉಪ ಆಯುಕ್ತರು (ಮಹದೇವಪುರ) ರವರ ಅಧ್ಯಕ್ಷತೆಯಲ್ಲಿ ದಿನಾಂಕ:-06.08.2022 ರಂದು ಪೂರ್ವಾಹ್ನ 11.30 ಗಂಟೆಗೆ ಹೊರಮಾವು ಉಪವಿಭಾಗದ ವಾರ್ಡ್-25 ರ ಕಛೇರಿಯಲ್ಲಿ ಸಭೆಯನ್ನು ಏರ್ಪಡಿಸಲಾಗಿದ್ದು, ಸಭೆಯ ನಡವಳಿಗಳು ಈ ಕೆಳಕಂಡಂತಿರುತ್ತದೆ.

ಉಪಸ್ಥಿತರು:

| ಕ್ರ.ಸಂ | ಹೆಸರು | ಹುದ್ದೆ |
|---|---|---|
| | **ಅಧಿಕಾರಿಗಳು** | |
| 1 | ಶ್ರೀಮತಿ.ಸರೋಜಾದೇವಿ | ನೋಡಲ್ ಅಧಿಕಾರಿ ವಾ.ನಂ.25 ಹಾಗೂ ಉಪ-ಆಯುಕ್ತರು (ಮಹದೇವಪುರ) |
| 2 | ಶ್ರೀ.ರಮೇಶ್ | ಕಿರಿಯ ಅಭಿಯಂತರರು |
| 3 | ಶ್ರೀ.ಸಂಜಯ್ ಕುಮಾರ್ | ಹಿರಿಯ ಆರೋಗ್ಯ ನಿರೀಕ್ಷಕರು |
| 4 | ಶ್ರೀ.ಹರೀಶ್ ಕುಮಾರ್.ಕೆ.ವಿ | ಕಿರಿಯ ಆರೋಗ್ಯ ನಿರೀಕ್ಷಕರು |
| 5 | ಪಿ.ಜಗದೀಶ್ | ಮಾರ್ಷಲ್ ವಾರ್ಡ್ ನಂ.25 |
| | **ಸಾರ್ವಜನಿಕರು** | |
| 6 | ಶ್ರೀ.ಭಾಸ್ಕರ್ ನಾಯ್ಡು, ಶ್ರೀಮತಿ.ಅನ್ನಪೂರ್ಣ, ಶ್ರೀ.ಆನಂದ್.ಕೆ.ಎನ್ ಶ್ರೀ.ತಿರುಮಲ ಪ್ರಸಾದ್ | ಹೊಯ್ಸಳನಗರ ಎನ್‌ಕ್ಲೇವ್ ವೆಲ್‌ಫೇರ್ ಅಸೋಸಿಯೇಷನ್ |
| 7 | ಶ್ರೀಮತಿ.ಸುಭಾಷಿಣಿ ಆರ್ ಮೆನನ್ | ಫರ್ನ್ಸ್ ರೆಸಿಡೆನ್ಸ್ ವೆಲ್‌ಫೇರ್ ಅಸೋಸಿಯೇಷನ್, ಕೆ.ನಾರಾಯಣಪುರ |
| 8 | ಶ್ರೀಮತಿ. ನಾಗಜ್ಯೋತಿ | ಪ್ರಗತಿ ಬಡಾವಣೆ ರೆಸಿಡೆನ್ಸ್ ವೆಲ್‌ಫೇರ್ ಅಸೋಸಿಯೇಷನ್ |
| 9 | ಶ್ರೀ.ಶಾಮರಾವ್ | ರಾಮಮೂರ್ತಿನಗರ ರೆಸಿಡೆನ್ಸ್ ವೆಲ್‌ಫೇರ್ ಅಸೋಸಿಯೇಷನ್ |
| 10 | ಶ್ರೀ.ನಾಗರಾಜಯ್ಯ, ಶ್ರೀ.ಶಿವಕುಮಾರ್, ಶ್ರೀ.ದಿವಾಕರ್ | ರಾಮಸ್ವಾಮಿರೆಡ್ಡಿ ಲೇಔಟ್, ಮುನಿರೆಡ್ಡಿ ಲೇಔಟ್, ತಿಮ್ಮರೆಡ್ಡಿ ಲೇಔಟ್ ರೆಸಿಡೆನ್ಸ್ ವೆಲ್‌ಫೇರ್ ಅಸೋಸಿಯೇಷನ್ |
| 11 | ಶ್ರೀ.ನಾಗರಾಜು. | ಸರ್.ಎಂ.ವಿ.ನಗರ ರೆಸಿಡೆನ್ಸ್ ವೆಲ್‌ಫೇರ್ ಅಸೋಸಿಯೇಷನ್ |
| 12 | ಶ್ರೀ.ನಿತೇಶ್ | ಬಿ.ಡಿ.ಎಸ್ ನಗರ, ಕೆ.ನಾರಾಯಣಪುರ ರೆಸಿಡೆನ್ಸ್ ವೆಲ್‌ಫೇರ್ ಅಸೋಸಿಯೇಷನ್ |
| 13 | ಶ್ರೀಮತಿ.ರೀಟಾ | ಹೊಯ್ಸಳನಗರ |
| 14 | ಶ್ರೀಕಾಂತ್, ಬಿಜು.ಎಸ್, ರವಿ | ಮಲ್ಲಪ್ಪ ಬಡಾವಣೆ |
| 15 | ಪಿ.ಜಯಕುಮಾರ್ | ಹೊರಮಾವು ವಾರ್ಡ್ ನಂ.25 |
| 16 | ಶ್ರೀ.ಸೃಜನ್ | ಹೊರಮಾವು ವಾರ್ಡ್ ನಂ.25 |
| 17 | ಶ್ರೀ.ಟಿ.ಶ್ರೀನಿವಾಸ್ | ಹೊರಮಾವು ವಾರ್ಡ್ ನಂ.25 |

ಮು.ಪು.

ವಾರ್ಡ್ ನೋಡಲ್ ಅಧಿಕಾರಿ/ಉಪ ಆಯುಕ್ತರು (ಮಹದೇವಪುರ) ರವರ ಸಮ್ಮುಖದಲ್ಲಿ ಸಭೆಗೆ ಹಾಜರಾದ ಎಲ್ಲಾ ಇಲಾಖಾ ಅಧಿಕಾರಿ/ಸಿಬ್ಬಂದಿ ಇತರೆ ಸಂಘ ಸಂಸ್ಥೆಗಳು ಸಾರ್ವಜನಿಕರಿಗೆ ಸುಸ್ವಾಗತ ಕೋರುತ್ತಾ, ಬಿಬಿಎಂಪಿ ವಾರ್ಡ್ ನಂ.25 ರ ವ್ಯಾಪ್ತಿಯಲ್ಲಿ ಅಭಿವೃದ್ಧಿ ಕಾರ್ಯ, ಮೂಲಭೂತ ಸೌಕರ್ಯಗಳಾದ ಘನತ್ಯಾಜ್ಯ ವಸ್ತುಗಳ ನಿರ್ವಹಣೆ, ಸಾರ್ವಜನಿಕ ಆರೋಗ್ಯ, ನಗರದ ಸ್ವಚ್ಛತೆ, ರಸ್ತೆ ನಿರ್ವಹಣೆ, ಬೃಹತ್ ನೀರುಗಾಲುವೆಗಳ ನಿರ್ವಹಣೆ, ಬೀದಿ ದೀಪಗಳ ನಿರ್ವಹಣೆ, ಕಲ್ಯಾಣ ಕಾರ್ಯಕ್ರಮಗಳು, 110 ಹಳ್ಳಿಗಳ ವ್ಯಾಪ್ತಿಯಲ್ಲಿ ಬಿಡಬ್ಲ್ಯೂಎಸ್ಎಸ್ಬಿ ರವರು ಕೊಳವೆ ಸಾಲುಗಳ ಅಳವಡಿಸುತ್ತಿರುವ ಸಂಬಂಧ ಹಾಗೂ ಸಾರ್ವಜನಿಕರ ಸಮಸ್ಯೆ ಕುಂದುಕೊರತೆಗಳನ್ನು ಬಗೆಹರಿಸುವಲ್ಲಿ ಅಗತ್ಯ ಕ್ರಮ ಕೈಗೊಳ್ಳಲು ಸಂಬಂಧಪಟ್ಟ ಎಲ್ಲಾ ಇಲಾಖೆಯ ಅಧಿಕಾರಿ ಹಾಗೂ ಸಾರ್ವಜನಿಕರಿಗೆ ಸುಸ್ವಾಗತ ಕೋರಿ ಸಭೆಯನ್ನು ಆರಂಭಿಸಿದರು.

ವಾರ್ಡ್ ಸಮಸ್ಯೆಗಳ ಬಗ್ಗೆ ಚರ್ಚೆ:-

ಶ್ರೀ.ಭಾಸ್ಕರ್ ನಾಯ್ಡು, ಶ್ರೀಮತಿ.ಅನ್ನಪೂರ್ಣ, ಶ್ರೀ.ಆನಂದ್.ಕೆ.ಎಸ್ ಶ್ರೀ.ತಿರುಮಲ ಪ್ರಸಾದ್ ಹೊಯ್ಸಳನಗರ ಎಕ್ಸ್‌ಕ್ಲೂಸಿವ್ ವೆಲ್‌ಫೇರ್ ಅಸೋಸಿಯೇಷನ್:- ರವರು ಮಾತನಾಡಿ ಹೊಯ್ಸಳನಗರ 4ನೇ, 6ನೇ, 8ನೇ ಅಡ್ಡರಸ್ತೆಗಳಲ್ಲಿ ಇಲ್ಲಿನ ಕೆಲವು ಸ್ಥಳೀಯರು ತಮ್ಮ ಮನೆಗಳಲ್ಲಿನ ಕಕ್ಕಸು ನೀರನ್ನು ನೇರವಾಗಿ ಹಾಲಿ ಇರುವ ಮಳೆ ನೀರಿನ ಕಾಲುವೆಗೆ ಬಿಟ್ಟಿದ್ದು, ಇದರಿಂದ ಸಾಂಕ್ರಾಮಿಕ ರೋಗಗಳು ಹರಡುತ್ತಿದ್ದು, ಇಲ್ಲಿನ ಸಾರ್ವಜನಿಕರಿಗೆ ಹ್ಯಾಂಡ್ ಬಿಲ್ ಮುಖಾಂತರ ಬಿಬಿಎಂಪಿ ಮತ್ತು ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ರವರು ಸಾರ್ವಜನಿಕರಿಗೆ ತಿಳುವಳಿಕೆ ನೀಡಿ ಮಳೆನೀರಿನ ಚರಂಡಿಗೆ ಬಿಟ್ಟಿರುವ ಕಕ್ಕಸು ನೀರಿನ ಕೊಳವೆಗಳನ್ನು ಕಡಿತಗೊಳಿಸಲು, 3ನೇ ಮುಖ್ಯರಸ್ತೆ 8ನೇ ಅಡ್ಡರಸ್ತೆಯಲ್ಲಿ ಆರ್.ಸಿ.ಸಿ ಚರಂಡಿ ನಿರ್ಮಿಸಿಕೊಡಲು ಹಾಗೂ ಹೊಯ್ಸಳ ನಗರ 2ನೇ ಅಡ್ಡರಸ್ತೆಯಲ್ಲಿ ಮ್ಯಾನ್‌ಹೋಲ್‌ನಿಂದ ರಸ್ತೆಯ ಮೇಲೆ ನೀರು ಉಕ್ಕಿ ಹರಿಯುತ್ತಿದ್ದು, ಇದನ್ನು ಕೂಡಲೇ ಕ್ರಮ ವಹಿಸಲು ಮನವಿ ಮಾಡಿರುತ್ತಾರೆ.

ಕ್ರಮ:- ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೊರಮಾವು ಉಪ-ವಿಭಾಗ ಹಾಗೂ ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಿಗೆ ಅಗತ್ಯ ಕ್ರಮವಹಿಸಲು ಸಭೆಯು ಸೂಚಿಸಿತು.

ಶ್ರೀಮತಿ.ಪ್ರಭಾವತಿ ಆರ್ ಮೆನನ್ ಫರ್ಸ್ಟ್ ರೆಸಿಡೆನ್ಸ್ ವೆಲ್‌ಫೇರ್ ಅಸೋಸಿಯೇಷನ್, ಕೆ.ನಾರಾಯಣಪುರ :- ರವರು ಮಾತನಾಡುತ್ತಾ, ಕೆ.ನಾರಾಯಣಪುರ ಸಮಾಜ ಕಲ್ಯಾಣ ಇಲಾಖೆಯ ವಸತಿ ನಿಲಯದ ಮುಂಭಾಗ ಬಿ.ಡಬ್ಲ್ಯೂ ಎಸ್.ಎಸ್.ಬಿ ಮ್ಯಾನ್‌ಹೋಲ್‌ನಿಂದ ನೀರು ಉಕ್ಕಿ ಹರಿಯುತ್ತಿದ್ದು, ಇದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದ್ದು ಇದರ ಸೂಕ್ತ ಕ್ರಮ ವಹಿಸಲು ಕೋರಿಕೊಂಡಿರುತ್ತಾರೆ.

ಕ್ರಮ:- ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೊರಮಾವು ಉಪ-ವಿಭಾಗ ಹಾಗೂ ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಿಗೆ ಅಗತ್ಯ ಕ್ರಮವಹಿಸಲು ಸಭೆಯು ಸೂಚಿಸಿತು.

ಶ್ರೀಮತಿ. ನಾಗಜ್ಯೋತಿ ಪ್ರಗತಿ ಬಡಾವಣೆ ರೆಸಿಡೆನ್ಸ್ ವೆಲ್‌ಫೇರ್ ಅಸೋಸಿಯೇಷನ್ :- ರವರು ಮಾತನಾಡುತ್ತಾ, 2ನೇ ಅಡ್ಡರಸ್ತೆಯಲ್ಲಿ ಸೀವೇಜ್ ಬ್ಲಾಕ್ ಆಗಿದ್ದು, ಮತ್ತು ಹೆಚ್.ಟಿ ಲೇನ್ ರಸ್ತೆಯಲ್ಲಿ ಕಸವನ್ನು ಹಾಕುತ್ತಿದ್ದು, ಹಾಗೂ 2ನೇ ಅಡ್ಡರಸ್ತೆಯನ್ನು ಸಮತಟ್ಟು ಮಾಡಿಕೊಡಲು ಕೋರಿಕೊಂಡಿರುತ್ತಾರೆ.

ಕ್ರಮ:- ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೊರಮಾವು ಉಪ-ವಿಭಾಗ ಹಾಗೂ ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಿಗೆ ಅಗತ್ಯ ಕ್ರಮವಹಿಸಲು ಸಭೆಯು ಸೂಚಿಸಿತು.

ಶ್ರೀ.ರಾಮರಾವ್ ರಾಮಮೂರ್ತಿನಗರ ರೆಸಿಡೆನ್ಸ್ ವೆಲ್‌ಫೇರ್ ಅಸೋಸಿಯೇಷನ್ :- ರವರು ಮಾತನಾಡುತ್ತಾ, ರಾಮಮೂರ್ತಿನಗರ ರೈಲ್ವೇ ಸೇತುವೆ ಮೇಲೆ ಮಳೆಗಾಲದಲ್ಲಿ ನೀರು ನಿಲ್ಲುತ್ತಿದ್ದು, ವಾಹನಗಳ ಮತ್ತು ಸಾರ್ವಜನಿಕರ ಸುಗಮ ಸಂಚಾರಕ್ಕೆ ತೊಂದರೆಯಾಗುತ್ತಿದ್ದು, ನೀರು ನಿಲ್ಲದಂತೆ ಶಾಶ್ವತ ಕ್ರಮವನ್ನು ಮಾಡಲು ಕೋರಿಕೊಂಡಿರುತ್ತಾರೆ.

ಕ್ರಮ:- ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೃಹತ್ ರಸ್ತೆಗಳ ವಿಭಾಗ ರವರಿಗೆ ಅಗತ್ಯ ಕ್ರಮವಹಿಸಲು ಸಭೆಯು ಸೂಚಿಸಿತು.

ಶ್ರೀ.ನಾಗರಾಜಯ್ಯ , ಶ್ರೀ.ಶಿವಕುಮಾರ್, ಶ್ರೀ.ದಿವಾಕರ್ ರಾಮಸ್ವಾಮಿರೆಡ್ಡಿ ಲೇಔಟ್, ಮುನಿರೆಡ್ಡಿ ಲೇಔಟ್, ತಿಮ್ಮರೆಡ್ಡಿ ಲೇಔಟ್ ರೆಸಿಡೆನ್ಸ್ ವೆಲ್‌ಫೇರ್ ಅಸೋಸಿಯೇಷನ್ :- ರವರು ಮಾತನಾಡುತ್ತಾ, ಸದರಿ ರಸ್ತೆಗಳನ್ನು ಇತ್ತೀಚೆಗೆ ಡಾಂಬರೀಕರಣ ಮಾಡಿದ್ದು, 2 ರಸ್ತೆಗಳಲ್ಲಿ ಮುಖ್ಯ ಕೊಳವೆಸಾಲನ್ನು ಅಳವಡಿಸಿದ್ದು, ಈ ಬಾಗದಲ್ಲಿ ರಸ್ತೆಯು ತುಂಬಾ ಹಾಳಾಗಿದ್ದು, ಡಾಂಬರೀಕರಣ ಮಾಡಿಕೊಡಲು ಕೋರಿಕೊಂಡಿರುತ್ತಾರೆ. ಇದಕ್ಕೆ ಸಹಾಯಕ ಅಭಿಯಂತರರು ಮಾತನಾಡಿ ಸದರಿ ಕಾಮಗಾರಿಯು ನಿರ್ವಹಣಾ ಅವಧಿ ಇರುವುದರಿಂದ ಮಳೆ ನಿಂತ ಕೂಡಲೇ ಸಮಸ್ತ ಗುತ್ತಿಗೆದಾರರ ವತಿಯಿಂದ ಮಾಡಿಕೊಡಲಾಗುವುದೆಂದು ತಿಳಿಸಲಾಯಿತು.

ಕ್ರಮ:- ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೊರಮಾವು ಉಪ-ವಿಭಾಗ ರವರಿಗೆ ಅಗತ್ಯ ಕ್ರಮವಹಿಸಲು ಸಭೆಯು ಸೂಚಿಸಿತು.

<u>ಶ್ರೀ ನಾಗರಾಜು, ಸರ್.ಎಂ.ವಿ.ನಗರ ರೆಸಿಡೆನ್ಸ್ ವೆಲ್‌ಫೇರ್ ಅಸೋಸಿಯೇಷನ್ :-</u> ರವರು ಮಾತನಾಡುತ್ತಾ, 17ನೇ ಅಡ್ಡರಸ್ತೆಯಲ್ಲಿ ರಸ್ತೆ ಅಭಿವೃದ್ಧಿಪಡಿಸಿ ಕಲ್ವರ್ಟ್ ನಿರ್ಮಿಸಿಕೊಡಲು ಕೋರಿಕೊಂಡಿರುತ್ತಾರೆ.
<u>ಕ್ರಮ:-</u> ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೊರಮಾವು ಉಪ-ವಿಭಾಗ ರವರಿಗೆ ಅಗತ್ಯ ಕ್ರಮವಹಿಸಲು ಸೂಚಿಸಲಾಯಿತು.

<u>ಶ್ರೀ ನಿತೇಶ್ ಬಿ.ಡಿ.ಎಸ್ ನಗರ, ಕೆ.ನಾರಾಯಣಪುರ ರೆಸಿಡೆನ್ಸ್ ವೆಲ್‌ಫೇರ್ ಅಸೋಸಿಯೇಷನ್ :-</u> ರವರು ಮಾತನಾಡುತ್ತಾ, 8ನೇ ಅಡ್ಡರಸ್ತೆಯಲ್ಲಿ ಡಾಂಬರೀಕರಣ ಮಾಡಿಕೊಡಲು ಕೋರಿಕೊಂಡಿರುತ್ತಾರೆ.
<u>ಕ್ರಮ:-</u> ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೊರಮಾವು ಉಪ-ವಿಭಾಗ ರವರಿಗೆ ಅಗತ್ಯ ಕ್ರಮವಹಿಸಲು ಸೂಚಿಸಲಾಯಿತು.

ಸಭೆಯನ್ನು ಮುಕ್ತಾಯಗೊಳಿಸುವ ಸಲುವಾಗಿ ಕೊನೆಯದಾಗಿ ಸಹಾಯಕ ಹೊರಮಾವು ಉಪ-ವಿಭಾಗ ರವರು ಸಭೆಯಲ್ಲಿ ಬಂದ ಸಲಹೆ ಸೂಚನೆಗಳನ್ನು ಪರಿಗಣಿಸಿ ಧನ್ಯವಾದಗಳನ್ನು ತಿಳಿಸುತ್ತಾ, ವಾರ್ಡ್‌ನ್ನು ಸಮಗ್ರವಾಗಿ ಅಭಿವೃದ್ಧಿಪಡಿಸುವ ಬಗ್ಗೆ ವಾರ್ಡ್ ಮಟ್ಟದಲ್ಲಿ ಕಾರ್ಯಯೋಜನೆಯನ್ನು ರೂಪಿಸಿಕೊಂಡು ಕ್ರಮವಹಿಸುವುದಾಗಿ ತಿಳಿಸುತ್ತಾ, ಮಹನೀಯರೊಂದಿಗೆ ನೋಡಲ್ ಅಧಿಕಾರಿಗಳ ಅಪ್ಪಣೆ ಮೇರೆಗೆ ಸಭೆಯನ್ನು ಮುಕ್ತಾಯಗೊಳಿಸಿದರು.

ನೋಡಲ್ ಅಧಿಕಾರಿ ವಾರ್ಡ್ ನಂ.25
ಕಂದಾಯ ಉಪ ಆಯುಕ್ತರು
(ಮಹದೇವಪುರ) ವಲಯ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಕಿರಿಯ ಅಭಿಯಂತರರು 06/8/2022
ಹೊರಮಾವು ವಾರ್ಡ್‌ಸಂಖ್ಯೆ-25
ಬಿ.ಬಿ.ಎಂ.ಪಿ.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ.

ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ, ಹೊರಮಾವು ಉಪ ವಿಭಾಗ,

ಮಹದೇವಪುರ ವಲಯ, ಬೆಂಗಳೂರು – **560 113**.

ದಿನಾಂಕ:-04.08.2022

ಸಂಖ್ಯೆ:ಸ.ಕಾ.ಅ/ವಾರ್ಡ್-25/ಪಿ.ಆರ್/ /2022-23

## "ಸಭಾ ಸೂಚನಾ ಪತ್ರ"

ವಿಷಯ:- ದಿನಾಂಕ:-06.08.2022 ಶನಿವಾರ ಬೆಳಿಗ್ಗೆ 11.30 ಗಂಟೆಗೆ ಹೊರಮಾವು ಉಪವಿಭಾಗ ವಾರ್ಡ್ ನಂ.25 ರ ಕಛೇರಿಯಲ್ಲಿ ನಡೆಯುವ ಸಭೆಗೆ ಹಾಜರಾಗುವ ಬಗ್ಗೆ.

ಉಲ್ಲೇಖ:-ಮಾನ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಕಛೇರಿ ಆದೇಶ ಸಂಖ್ಯೆ:ಬಿ12(5)ಪಿಆರ್/35/2020-21, ದಿನಾಂಕ:21/09/2020.

***********

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಾರ್ಡ್ ವ್ಯಾಪ್ತಿಯಲ್ಲಿ ಅಭಿವೃದ್ಧಿ ಕಾರ್ಯ, ಮೂಲಭೂತ ಸೌಕರ್ಯಗಳಾದ ಘನತ್ಯಾಜ್ಯ ವಸ್ತುಗಳ ನಿರ್ವಹಣೆ, ಸಾರ್ವಜನಿಕ ಆರೋಗ್ಯ, ನಗರದ ಸ್ವಚ್ಛತೆ, ರಸ್ತೆ ನಿರ್ವಹಣೆ, ಬೃಹತ್ ನೀರುಗಾಲುವೆಗಳ ನಿರ್ವಹಣೆ, ಬೀದಿ ದೀಪಗಳ ನಿರ್ವಹಣೆ, ಕಲ್ಯಾಣ ಕಾರ್ಯಕ್ರಮಗಳು, 110 ಹಳ್ಳಿಗಳ ವ್ಯಾಪ್ತಿಯಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರು ಕೊಳವೆ ಸಾಲುಗಳ ಅಳವಡಿಸುತ್ತಿರುವ ಸಂಬಂಧ ಹಾಗೂ ಸಾರ್ವಜನಿಕರ ಸಮಸ್ಯೆ ಕುಂದುಕೊರತೆಗಳನ್ನು ಬಗೆಹರಿಸುವಲ್ಲಿ ಅಗತ್ಯ ಕ್ರಮ ಕೈಗೊಳ್ಳಲು ಹಾಗೂ ಎಲ್ಲಾ ಇಲಾಖೆಯ ಅಧಿಕಾರಿಗಳು ವಾರ್ಡ್ ನಂ.25 ರ ಹೊರಮಾವು ಉಪವಿಭಾಗಕ್ಕೆ ಸಂಬಂಧಿಸಿದ ಮಾಹಿತಿಗಳೊಂದಿಗೆ ದಿನಾಂಕ:-06.08.2022 ಶನಿವಾರ ಬೆಳಿಗ್ಗೆ 11.30 ಗಂಟೆಗೆ ವಾರ್ಡ್ ನಂ.25 ರ ಸ.ಕಾ.ಅ ಹೊರಮಾವು ಕಛೇರಿಗೆ ಹಾಜರಾಗಲು ಕೋರಲಾಗಿದೆ.

ವಿಶೇಷ ಸೂಚನೆ:- Covid-19 ಇರುವುದರಿಂದ ಎಲ್ಲರು ಕಡ್ಡಾಯವಾಗಿ ಸ್ಯಾನಿಟೈಜರ್ ಬಳಸಿ, ಮಾಸ್ಕ್ ಧರಿಸಬೇಕು ಮತ್ತು ಸಾಮಾಜಿಕ ಅಂತರವನ್ನು ಕಾಯ್ದುಕೊಳ್ಳುವುದು.

04/08/2

ಸಂಚಾಲಕರು
ಮತ್ತು ಸಹಾಯಕ ಅಭಿಯಂತರರು
ಹೊರಮಾವು ವಾರ್ಡ್ ಸಂಖ್ಯೆ-25.

ಇವರಿಗೆ,

1. ಕಾರ್ಯಪಾಲಕ ಅಭಿಯಂತರರು, ಕೆ.ಆರ್.ಪುರ ವಿಭಾಗ, ಬಿಬಿಎಂಪಿ.
2. ಕಾರ್ಯಪಾಲಕ ಅಭಿಯಂತರರು, ವಿದ್ಯುತ್ (ಮಹದೇವಪುರ ವಲಯ) ಬಿಬಿಎಂಪಿ.
3. ಕಾರ್ಯಪಾಲಕ ಅಭಿಯಂತರರು, ಬಿಡಬ್ಲ್ಯೂಎಸ್ಎಸ್‌ಬಿ, ಸಿಎಂಸಿ
4. ಕಾರ್ಯಪಾಲಕ ಅಭಿಯಂತರರು, ಬಿಡಬ್ಲ್ಯೂಎಸ್ಎಸ್‌ಬಿ, 110 ಹಳ್ಳಿಗಳ ವ್ಯಾಪ್ತಿ.
5. ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ.
6. ಕಾರ್ಯಪಾಲಕ ಅಭಿಯಂತರರು, ರಸ್ತೆ ಮತ್ತು ಮೂಲಭೂತ ಸೌಕರ್ಯಗಳು ಬಿಬಿಎಂಪಿ.
7. ಕಾರ್ಯಪಾಲಯ ಅಭಿಯಂತರರು, ಕೆರೆಗಳ ವಿಭಾಗ, ಬಿಬಿಎಂಪಿ.
8. ಕಾರ್ಯಪಾಲಯ ಅಭಿಯಂತರರು, ಬೃಹತ್ ನೀರುಗಾಲುವೆ ವಿಭಾಗ, ಬಿಬಿಎಂಪಿ.
9. ಆರೋಗ್ಯ ವೈದ್ಯಾಧಿಕಾರಿಗಳು, ಕೆ.ಆರ್.ಪುರ.
10. ಸಹಾಯಕ ನಿರ್ದೇಶಕರು, ನಗರ ಯೋಜನೆ, ಮಹದೇವಪುರ ವಲಯ, ಬಿಬಿಎಂಪಿ.
11. ಡಾ//ಶಿವಕುಮಾರ್, ಆರೋಗ್ಯಾಧಿಕಾರಿಗಳು, ಕೆ.ನಾರಾಯಣಪುರ ಪ್ರಾಥಮಿಕ ಆರೋಗ್ಯ ಕೇಂದ್ರ.
12. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣಾ ವಿಭಾಗ, ಕೆ.ಆರ್.ಪುರ.
13. ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೊರಮಾವು ಉಪವಿಭಾಗ, ಬಿಬಿಎಂಪಿ.
14. ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಆರ್.ಟಿ.ನಗರ.
15. ಕಲ್ಯಾಣಾಧಿಕಾರಿಗಳು, ಮಹದೇವಪುರ ವಲಯ, ಬಿಬಿಎಂಪಿ.
16. ಪೊಲೀಸ್‌ಠಾಣೆ ಅಧಿಕಾರಿ ಹೆಣ್ಣೂರು/ಕೊತ್ತನೂರು/ರಾಮಮೂರ್ತಿನಗರ.
17. ಪೊಲೀಸ್ ಇನ್ಸ್‌ಪೆಕ್ಟರ್, ಲಾ ಅಂಡ್ ಆರ್ಡರ್ ರಾಮಮೂರ್ತಿನಗರ/ಕೊತ್ತನೂರು/ಹೆಣ್ಣೂರು ಪೊಲೀಸ್ ಠಾಣೆ. /ಟ್ರಾಫಿಕ್
18. ಪೊಲೀಸ್ ಇನ್ಸ್‌ಪೆಕ್ಟರ್, ಸಂಚಾರ ವಿಭಾಗ, ಬಾಣಸವಾಡಿ/ಕೆ.ಆರ್.ಪುರ.
9. ಕಛೇರಿ ಪ್ರತಿ.